# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 275 ಯುಎನ್‌ಇ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 31-07-2018.

ಕುವೆಂಪು ವಿಶ್ವವಿದ್ಯಾನಿಲಯ
ಶೈಕ್ಷಣಿಕ ವಿಭಾಗ
ನಂ. 1691 ತಾ. 08/08/18

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು – 560 001.

ಇವರಿಗೆ:

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
4. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ-577 451.
5. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ – 585 106.
6. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
7. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101
8. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583 276.
9. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು-570 006.
10. ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ-586 101.
11. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
12. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
16. ಕುಲಸಚಿವರು, ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಕುಲಸಚಿವರು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
18. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು
19. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕ, ಕೋಲಾರ ಜಿಲ್ಲೆ.

ಕುಲಸಚಿವರ ಕಛೇರಿ
07 AUG 2018
ಶಂಕರಘಟ್ಟ-577451
6529

ಮಾನ್ಯರೆ,

ವಿಷಯ: ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆಯ ಅಭಿವೃದ್ಧಿ ಮತ್ತು ಬೆಳವಣಿಗೆಯ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರಿಂದ ಸ್ವೀಕೃತವಾಗಿರುವ ಸಭಾ ಸೂಚನಾ ಪತ್ರವನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆಯ ಅಭಿವೃದ್ಧಿ ಮತ್ತು ಬೆಳವಣಿಗೆಯ ಕುರಿತಂತೆ ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 07-06-2018ರಂದು ನಡೆದ ಸಭೆಯಲ್ಲಿ ಈ ಕೆಳಕಂಡಂತೆ ನಿರ್ಣಯ ತೆಗೆದುಕೊಳ್ಳಲಾಗಿದ್ದು, ಅದರಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

*ಸ್ಕೌಟ್ಸ್/ಗೈಡ್ಸ್‌ನಲ್ಲಿಯ ರೋವರ್ಸ್/ರೇಂಜರ್ಸ್ ವಿದ್ಯಾರ್ಥಿಗಳು ಯುವಶಕ್ತಿಯಾಗಿದ್ದು, ಅವರುಗಳಲ್ಲಿ ಸೇವಾ ಮನೋಭಾವ, ಸಾಮಾಜಿಕ ಜವಾಬ್ದಾರಿ, ಶಿಸ್ತು, ಸಂಯಮ ಇತ್ಯಾದಿಗಳನ್ನು ಮೂಡಿಸುವಲ್ಲಿ ಸ್ಕೌಟ್ಸ್/ಗೈಡ್ಸ್ ಕಾರ್ಯಚಟುವಟಿಕೆಗಳು . ಅತ್ಯಗತ್ಯ ವಿಷಯವನ್ನು ತಿಳಿಸಿ. ಈ ರೋವರ್ಸ್/ರೇಂಜರ್ಸ್ ಚಟುವಟಿಕೆಗಳಲ್ಲಿ ಪದವಿಪೂರ್ವ ಶಿಕ್ಷಣ*

Registrar's
Personal Section
To No. 200
Date 6/8/18

....2

ಇಲಾಖೆಯ ಮತ್ತು ಪದವಿ ಶಿಕ್ಷಣ ಇಲಾಖೆಯ ವಿದ್ಯಾರ್ಥಿಗಳು ಹೆಚ್ಚು-ಹೆಚ್ಚು ಭಾಗವಹಿಸುವಂತಾಗುವಲ್ಲಿ ಸೂಕ್ತ ಪ್ರೋತ್ಸಾಹ ಮತ್ತು ಪ್ರೇರಣಾ ಕಾರ್ಯಕ್ರಮಗಳನ್ನು ಹಮಿಕೊಳ್ಳುವ ಬಗ್ಗೆ ವಿಶೇಷ ಗಮನಹರಿಸಬೇಕಾಗಿರುವ ಹಿನ್ನೆಲೆಯಲ್ಲಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣರವರ ಮೂಲಕ ಸಂಬಂಧಪಟ್ಟ ಪದವಿಪೂರ್ವ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರುಗಳಿಗೆ ಮತ್ತು ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳ ಕುಲಪತಿಗಳ ಮೂಲಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು".

ತಮ್ಮ ನಂಬುಗೆಯ,

(ಎನ್. [illegible]ಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಪ್ರತಿ:

1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
2. ರಾಜ್ಯದ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಸಂಸ್ಥೆ, ನಂ. 39, ಪ್ಯಾಲೇಸ್ ರೋಡ್, ಬೆಂಗಳೂರು-01.

ದಿನಾಂಕ:07.06.2018ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ವಿಧಾನ ಸೌಧದ 3ನೇ ಮಹಡಿಯಲ್ಲಿನ ಕೊಠಡಿ ಸಂಖ್ಯೆ: 313ರಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಸಂಸ್ಥೆಯ ಅಭಿವೃದ್ಧಿ ಚಟುವಟಿಕೆಗಳ ಕುರಿತಾದ ಸಭೆಯ ನಡವಳಿಗಳು.

ಸಭೆಯಲ್ಲಿ ಹಾಜರಿದ್ದವರು: ಲಗತ್ತು ಪಟ್ಟಿಯಂತೆ

ಶ್ರೀ ಪಿ.ಜಿ.ಆರ್.ಸಿಂಧ್ಯ, ರಾಜ್ಯ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರವರು ನೂತನವಾಗಿ ಮುಖ್ಯಮಂತ್ರಿಗಳಾಗಿ ಅಧಿಕಾರ ವಹಿಸಿಕೊಂಡಿರುವ ಶ್ರೀ ಹೆಚ್.ಡಿ.ಕುಮಾರಸ್ವಾಮಿರವರಿಗೆ ಶುಭಾಶಯ ಕೋರುತ್ತಾ, ಸಭೆಗೆ ಸ್ವಾಗತಿಸಿದರು. ಜೊತೆಗೆ ಸಭೆಯಲ್ಲಿ ಉಪಸ್ಥಿತರಿದ್ದ ಇತರೆ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು.

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರುಗಳಿಗೆ ಸದರಿಯವರುಗಳು ತಮ್ಮ ಜಿಲ್ಲೆಯಲ್ಲಿರುವ ಅರ್ಹ ಸ್ಕೌಟ್ / ಗೈಡ್ ಶಿಕ್ಷಕರುಗಳನ್ನು ಗುರುತಿಸಿ ಪ್ರತಿ ಜಿಲ್ಲೆಗೆ ಒಬ್ಬರು ಸ್ಕೌಟ್ ಶಿಕ್ಷಕರನ್ನು ಮತ್ತೊಬ್ಬರು ಗೈಡ್ ಶಿಕ್ಷಕಿಯನ್ನು ಆಯಾ ಜಿಲ್ಲೆಗಳ ಜಿಲ್ಲಾ ಸಂಘಟಕ ಶಿಕ್ಷಕರು (ಸ್ಕೌಟ್ಸ್ /ಗೈಡ್) ಗಳಾಗಿ ಕಾರ್ಯನಿರ್ವಹಿಸಲು ಆದೇಶಿಸಿ ಕ್ರಮ ಕೈಗೊಳ್ಳುವ ಬಗ್ಗೆ ಸೂಕ್ತ ಸುತ್ತೋಲೆ ಹೊರಡಿಸಲು ತೀರ್ಮಾನಿಸಲಾಯಿತು.

   (ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ & ಪ್ರೌಢ ಶಿಕ್ಷಣ ಇಲಾಖೆ)

2. ಸ್ಕೌಟ್ಸ್ / ಗೈಡ್ಸ್‌ನಲ್ಲಿಯ ರೋವರ್ಸ್/ ರೇಂಜರ್ಸ್ ವಿದ್ಯಾರ್ಥಿಗಳು ಯುವಶಕ್ತಿಯಾಗಿದ್ದು, ಅವರುಗಳಲ್ಲಿ ಸೇವಾ ಮನೋಭಾವ, ಸಾಮಾಜಿಕ ಜವಾಬ್ದಾರಿ, ಶಿಸ್ತು, ಸಂಯಮ ಇತ್ಯಾದಿಗಳನ್ನು ಮೂಡಿಸುವಲ್ಲಿ ಸ್ಕೌಟ್ಸ್ / ಗೈಡ್ಸ್ ಕಾರ್ಯಚಟುವಟಿಕೆಗಳು ಅತ್ಯಗತ್ಯ ಎಂಬುದನ್ನು ತಿಳಿಸಿ, ಈ ರೋವರ್ಸ್ / ರೇಂಜರ್ಸ್ ಚಟುವಟಿಕೆಗಳಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯ ಮತ್ತು ಪದವಿ ಶಿಕ್ಷಣ ಇಲಾಖೆಯ ವಿದ್ಯಾರ್ಥಿಗಳು ಹೆಚ್ಚು-ಹೆಚ್ಚು ಭಾಗವಹಿಸುವಂತಾಗುವಲ್ಲಿ ಸೂಕ್ತ ಪ್ರೋತ್ಸಾಹ ಮತ್ತು ಪ್ರೇರಣಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ವಿಶೇಷ ಗಮನಹರಿಸಬೇಕಾಗಿರುವ ಹಿನ್ನೆಲೆಯಲ್ಲಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ರವರ ಮೂಲಕ ಸಂಬಂಧಪಟ್ಟ ಪದವಿಪೂರ್ವ ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರುಗಳಿಗೆ ಮತ್ತು ಸಂಬಂಧಪಟ್ಟ ವಿಶ್ವವಿದ್ಯಾನಿಲಯಗಳ ಕುಲಪತಿಗಳ ಮೂಲಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಆದೇಶ ಹೊರಡಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

   (ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು)

3. ಪ್ರತಿ ಸ್ಕೌಟ್ಸ್/ ಗೈಡ್ಸ್ ವಿದ್ಯಾರ್ಥಿಗಳಿಂದ ಪ್ರಸ್ತುತ ಸಂಗ್ರಹಿಸುತ್ತಿರುವ ವಾರ್ಷಿಕ ಸ್ಕೌಟ್ಸ್ / ಗೈಡ್ಸ್ ಶುಲ್ಕ ತಲಾ ರೂ.5/- ರಿಂದ ರೂ.10/-ಕ್ಕೆ ಹೆಚ್ಚಿಸಲು ತೀರ್ಮಾನಿಸಲಾಯಿತು. ಈ ಬಗ್ಗೆ ಸೂಕ್ತ ಸರ್ಕಾರಿ ಆದೇಶ ಹೊರಡಿಸಲು ಸೂಚಿಸಲಾಯಿತು.

   (ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ & ಪ್ರೌಢ ಶಿಕ್ಷಣ ಇಲಾಖೆ)

4. 2018-19ನೇ ಸಾಲಿನ ಆಯ-ವ್ಯಯದಲ್ಲಿ ಈ ಸಾಲಿನಿಂದ ಪ್ರಾರಂಭಿಸಲು ಮಂಜೂರು ಮಾಡಿರುವ 100 ಸಂಯೋಜಿತ "ಕರ್ನಾಟಕ ಪಬ್ಲಿಕ್ ಶಾಲೆ"ಗಳಲ್ಲಿ ಕಬ್ಸ್/ ಬುಲ್‌ಬುಲ್ಸ್/ ಸ್ಕೌಟ್ಸ್ / ಗೈಡ್ಸ್/ ರೋವರ್ಸ್ / ರೇಂಜರ್ಸ್ ಘಟಕಗಳನ್ನು ಪ್ರಾರಂಭಿಸಲು ಪ್ರತಿ ಶಾಲೆಗೆ ರೂ.2,60,000/-ರಂತೆ ಒಟ್ಟು ರೂ.2.60 ಕೋಟಿಗಳನ್ನು ಬಿಡುಗಡೆ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಯಿತು.

   (ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ & ಪ್ರೌಢ ಶಿಕ್ಷಣ ಇಲಾಖೆ)

5. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳನ್ನು ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಮತ್ತು ಸರ್ಕಾರದ ಮಾದರಿ ಶಾಲೆಗಳಲ್ಲಿ ಪ್ರಾರಂಭಿಸಿ ಪ್ರೋತ್ಸಾಹಿಸುವ ಸಂಬಂಧ ಈಗಾಗಲೇ ಸಲ್ಲಿಸಿರುವ ಪ್ರಸ್ತಾವನೆಯಂತೆ 2018-19ನೇ ಸಾಲಿನಲ್ಲಿ ಮೊದಲನೇ ಹಂತವಾಗಿ ಕೋರಿರುವ ರೂ.12.00 ಕೋಟಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ & ಪ್ರೌಢ ಶಿಕ್ಷಣ ಇಲಾಖೆ)

6. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆಯ ಈ ಕೆಳಕಂಡ 3 ತರಬೇತಿ ಕೇಂದ್ರಗಳ ಅಭಿವೃದ್ಧಿಯ ಕುರಿತು ವಿಶೇಷ ಗಮನ ಹರಿಸುವ ಬಗ್ಗೆ ತೀರ್ಮಾನಿಸಲಾಯಿತು.

ಅ) ಡಾ॥ ಆನಿಬೆಸೆಂಟ್ ಸ್ಕೌಟ್ಸ್-ಗೈಡ್ಸ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಆ) ಕೊಂಡಜ್ಜಿ ಬಸಪ್ಪ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ಕೊಂಡಜ್ಜಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ.

ಇ) ಶಾಂತಿಗೃಹ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ, ಅರಮನೆ ರಸ್ತೆ, ಬೆಂಗಳೂರು-560 001.

ಮೇಲ್ಕಂಡ ತರಬೇತಿ ಕೇಂದ್ರಗಳಲ್ಲಿ ಕೈಗೊಳ್ಳಬೇಕಾದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಕಾರ್ಯಯೋಜನೆಯನ್ನು ತಯಾರಿಸಿ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಲು ತಿಳಿಸಲಾಯಿತು. ಜೊತೆಗೆ ಸಂಸ್ಥೆಯು ಈ ವಿಚಾರವಾಗಿ ಕೋರಿರುವ ರೂ.30.00 ಕೋಟಿಗಳ ಅನುದಾನದ ಪೈಕಿ ಈ ಸಾಲಿನಲ್ಲಿ ರೂ.10.00 ಕೋಟಿಗಳ ಅನುದಾನ ಬಿಡುಗಡೆಗೊಳಿಸುವ ಬಗ್ಗೆ ಸೂಕ್ತ ಕ್ರಮ ವಹಿಸಲು ಇಲಾಖಾ ಕಾರ್ಯದರ್ಶಿಗಳಿಗೆ ಸೂಚಿಸಲಾಯಿತು.

(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ & ಪ್ರೌಢ ಶಿಕ್ಷಣ ಇಲಾಖೆ)

7. ಸ್ಕೌಟ್ಸ್ / ಗೈಡ್ಸ್ ಚಟುವಟಿಕೆಗಳನ್ನು ಸಕ್ರಿಯವಾಗಿ ಅನುಷ್ಠಾನಗೊಳಿಸಿ ಗುಣಾತ್ಮಕ ಶಿಕ್ಷಣ ನೀಡಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಭಾಗಿತ್ವವು ಅಗತ್ಯವಾಗಿರುವುದನ್ನು ತಿಳಿಸುತ್ತಾ, ಸಂಸ್ಥೆಯ ಕೋರಿಕೆಯಂತೆ, ಪ್ರತಿ ತಾಲ್ಲೂಕಿಗೆ ಒಬ್ಬರು ಗ್ರೂಪ್ "ಬಿ" ಅಧಿಕಾರಿಯನ್ನು ಆಯಾ ಜಿಲ್ಲೆಯ ಡಯಟ್‌ನಿಂದ ಮತ್ತು ಪ್ರತಿ ಜಿಲ್ಲೆಗೆ ಒಬ್ಬರು ಗ್ರೂಪ್ "ಎ" ಜೂನಿಯರ್ ಅಧಿಕಾರಿಯನ್ನು ಆಯಾ ಜಿಲ್ಲೆಯ ಡಯಟ್ / ಸಿಟಿಇ ಯಿಂದ ನೋಡೆಲ್ ಅಧಿಕಾರಿಗಳನ್ನಾಗಿ ನಿಯೋಜಿಸಿ ಸದರಿ ಚಟುವಟಿಕೆಗಳು ಹೆಚ್ಚು ಫಲಪ್ರದವಾಗಿ ನಿರ್ವಹಣೆಯಾಗಲು ಅನುಕೂಲವಾಗುವಂತೆ ಪ್ರೋತ್ಸಾಹಿಸಲು ತೀರ್ಮಾನಿಸಲಾಯಿತು.

ಆಯಾಯಾ ಜಿಲ್ಲಾ ಮಟ್ಟದಲ್ಲಿ ನಿರ್ವಹಣೆಯಾಗುವ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮತ್ತು ಇತರೆ ಕ್ಷೇತ್ರ ಮಟ್ಟದ ಅಧಿಕಾರಿಗಳ ಮಾಸಿಕ ಸಭೆಯ ಅಜೆಂಡಾದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳ ಸಮರ್ಪಕ ನಿರ್ವಹಣೆ ಮತ್ತು ಅಭಿವೃದ್ಧಿ ಬಗ್ಗೆ ಪರಿಶೀಲಿಸಲು, ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರು (ಆಡಳಿತ)ರವರಿಗೆ ಸೂಚಿಸಲು ಮತ್ತು ಅದೇ ರೀತಿ ರಾಜ್ಯ ಮಟ್ಟದಲ್ಲಿ ನಡೆಯುವ ವಿವಿಧ ಜಿಲ್ಲಾ ಅಧಿಕಾರಿಗಳ ಸಭೆಯಲ್ಲಿಯೂ ಸಹ ಈ ವಿಷಯವನ್ನು ಕಾರ್ಯಸೂಚಿಯಲ್ಲಿ ಅಳವಡಿಸಿಕೊಂಡು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಪ್ರಗತಿ ಪರಿಶೀಲನೆ ನಡೆಸಲು ಕ್ರಮ ವಹಿಸುವಂತೆ ಸೂಚಿಸಲಾಯಿತು.

(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ & ಪ್ರೌಢ ಶಿಕ್ಷಣ ಇಲಾಖೆ ಮತ್ತು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ)

8. 28ನೇ ಕರ್ನಾಟಕ ರಾಜ್ಯ ಸ್ಕೌಟ್ಸ್ ಮತ್ತು ಗೈಡ್ಸ್ ಜಾಂಬೋರೇಟ್‌ನ್ನು ಹಾಸನದಲ್ಲಿ ಏರ್ಪಡಿಸುವ ಬಗ್ಗೆ ಸನ್ಮಾನ್ಯ ಮುಖ್ಯಮಂತ್ರಿಗಳು ತಮ್ಮ ಸಂತೋಷವನ್ನು ವ್ಯಕ್ತಪಡಿಸಿದ್ದರು. ಈ ಕಾರ್ಯಕ್ರಮವನ್ನು ಏರ್ಪಡಿಸುವ ದಿನಾಂಕ ಮತ್ತು ಸ್ಥಳಗಳನ್ನು ನಿಗಧಿಪಡಿಸಿ ಮುಂದಿನ ಕ್ರಮ ಕೈಗೊಳ್ಳಲು ರಾಜ್ಯ ಮುಖ್ಯ ಆಯುಕ್ತರಿಗೆ ತಿಳಿಸಲಾಯಿತು.

ಸದರಿ ಕಾರ್ಯಕ್ರಮದ ನಿರ್ವಹಣೆಗೆ ಅವಶ್ಯವಿರುವ ವಿಶೇಷ ಅನುದಾನದ ಕುರಿತಾದ ಪ್ರಸ್ತಾವನೆಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಇವರಿಗೆ ಸಲ್ಲಿಸುವಂತೆ ಹಾಗೂ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ,
ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ & ಪ್ರೌಢ ಶಿಕ್ಷಣ ಇಲಾಖೆ ಮತ್ತು
ರಾಜ್ಯ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ)

9. ಕರ್ನಾಟಕದಲ್ಲಿ ಭಾರತ್ ಸ್ಕೌಟ್ಸ್ / ಗೈಡ್ಸ್‌ನ ಅಂತರರಾಷ್ಟ್ರೀಯ ಸಮ್ಮೇಳನವನ್ನು 2019-20ನೇ ಸಾಲಿನಲ್ಲಿ ಆಯೋಜಿಸಲು ಕ್ರಮ ಕೈಗೊಳ್ಳಲಿದ್ದು, ಈ ಬಗ್ಗೆ ಸರ್ಕಾರದ ಅನುಮತಿಯ ಅವಶ್ಯಕತೆ ಇದ್ದು, ಈ ಬಗ್ಗೆ ಸನ್ಮಾನ್ಯ ಮುಖ್ಯಮಂತ್ರಿಗಳ ಸಮ್ಮತಿಯನ್ನು ಕೋರಲಾಯಿತು.

ಸನ್ಮಾನ್ಯ ಮುಖ್ಯಮಂತ್ರಿಗಳು ಈ ಬಗ್ಗೆ ತಮ್ಮ ಅತೀವ ಸಂತೋಷ ವ್ಯಕ್ತಪಡಿಸಿ ತಮ್ಮ ಸಮ್ಮತಿಯನ್ನು ತಿಳಿಸಿ, ಈ ಬಗ್ಗೆ ಕೈಗೊಳ್ಳಲಿರುವ ಕ್ರಮಗಳ ಕುರಿತು ಸರ್ಕಾರದ ಮುಖ್ಯಕಾರ್ಯದರ್ಶಿಗಳು ಅನುಮತಿ ನೀಡುವ ಬಗ್ಗೆ ಮತ್ತು ಕರ್ನಾಟಕ ಸರ್ಕಾರವು ನಿರ್ವಹಿಸಬೇಕಾದ ಕ್ರಮಗಳ ಬಗ್ಗೆಯ ವಿವರಗಳೊಂದಿನ ಪ್ರಸ್ತಾವನೆಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ರವರ ಮೂಲಕ ಸರ್ಕಾರದ ಮುಖ್ಯಕಾರ್ಯದರ್ಶಿಗಳು ರವರಿಗೆ ಸಲ್ಲಿಸಲು ತಿಳಿಸಿದರು.

(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು
ರಾಜ್ಯ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ)

10. ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ. ಸ್ಕೌಟ್ಸ್/ ಗೈಡ್ಸ್/ ರೋವರ್ಸ್/ ರೇಂಜರ್ಸ್‌ಗಳಿಗೆ ವಿಶೇಷ ಗೌರವ ನೀಡುವ ಸಲುವಾಗಿ ಮುಖ್ಯಮಂತ್ರಿಗಳ ರಾಜ್ಯ ಮಟ್ಟದ ಪಾರಿತೋಷಕ ಪದಕವನ್ನು ನೀಡುವ ಪ್ರಸ್ತಾವನೆಯನ್ನು ಮಂಡಿಸಲಾಯಿತು. ವಿದ್ಯಾರ್ಥಿಗಳಲ್ಲಿ ಸೇವಾಮನೋಭಾವನೆಯನ್ನು ಹೆಚ್ಚಿಸುವಲ್ಲಿ ಇಂಥಹ ಪುರಸ್ಕಾರಗಳು ಅವಶ್ಯಕವಾಗಿರುವುದನ್ನು ಮಾನ್ಯ ಮುಖ್ಯ ಮಂತ್ರಿಗಳು ಶ್ಲಾಘಿಸಿ, ವಿದ್ಯಾರ್ಥಿಗಳಿಗೆ ಹೆಚ್ಚು ಪ್ರೋತ್ಸಾಹಿಸುವ ನಿಟ್ಟನಲ್ಲಿ ವಿಸ್ತೃತ ರೂಪುರೇಷೆಗಳನ್ನು ಒಳಗೊಂಡ ವಿವರವಾದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಹಾಗೂ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಅನುಷ್ಠಾನಗೊಳಿಸುವ ಬಗ್ಗೆ ಅಗತ್ಯ ಕ್ರಮ ವಹಿಸಲು ಇಲಾಖಾ ಕಾರ್ಯದರ್ಶಿಯವರಿಗೆ ಸೂಚಿಸಲಾಯಿತು.

(ಕ್ರಮ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಮತ್ತು
ರಾಜ್ಯ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ)

11. ಪ್ರವಾಸೋದ್ಯಮ ಇಲಾಖೆಯಿಂದ ಪ್ರಸ್ತುತ "ಕರ್ನಾಟಕ ದರ್ಶನ" ಕಾರ್ಯಕ್ರಮದಡಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೆ ಇರುವ 10,000 ಮಿತಿಯನ್ನು 15,000 ವಿದ್ಯಾರ್ಥಿಗಳಿಗೆ ಹೆಚ್ಚಿಸುವ ಮತ್ತು ಅದಕ್ಕೆ ಬೇಕಾಗುವ ಹೆಚ್ಚುವರಿ ಅನುದಾನವನ್ನು ಮುಂದಿನ ಆಯಾವ್ಯಯದಲ್ಲಿ ಅವಕಾಶ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

(ಕ್ರಮ: ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ಮತ್ತು
ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ)

ಸ್ಕೌಟ್ಸ್ / ಗೈಡ್ಸ್ ಚಟುವಟಿಕೆಗಳ ಸಮರ್ಪಕ ನಿರ್ವಹಣೆಗಾಗಿ ಶಿಕ್ಷಕರುಗಳಿಗೆ ಸೂಕ್ತ ತರಬೇತಿ ನೀಡಲು ಅಗತ್ಯ ಕ್ರಮ ವಹಿಸುವಂತೆ ಇಲಾಖಾ ಅಧಿಕಾರಿಗಳಿಗೆ ಸೂಚಿಸಲಾಯಿತು.

ಶ್ರೀ ಚೆನ್ನಸ್ವಾಮಿ ರೆಡ್ಡಿ, ರಾಜ್ಯ ಕಾರ್ಯದರ್ಶಿಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರವರು ಸನ್ಮಾನ್ಯ ಮುಖ್ಯ ಮಂತ್ರಿಗಳು ಮತ್ತು ಸಭೆಯಲ್ಲಿ ಉಪಸ್ಥಿತರಿದ್ದ ಇಲಾಖಾ ಮುಖ್ಯಸ್ಥರಿಗೆ ವಂದಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯ ಮಂತ್ರಿ

<u>ಸಭೆಯಲ್ಲಿ ಹಾಜರಿದ್ದವರು:</u>

ಶ್ರೀಮತಿ ಕೆ.ರತ್ನಪ್ರಭಾ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು
ಶ್ರೀ ಪಿ.ಜಿ.ಆರ್.ಸಿಂಧ್ಯ ರಾಜ್ಯ ಮುಖ್ಯ ಆಯುಕ್ತರು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ✓
ಶ್ರೀ ಎಂ.ಲಕ್ಷ್ಮಿನಾರಾಯಣ, ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು
ಶ್ರೀ ತುಷಾರ್ ಗಿರಿ ನಾಥ್, ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು
ಡಾ॥ ರಾಜ್‌ಕುಮಾರ್ ಖತ್ರಿ, ಪ್ರಧಾನ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ✓
ಡಾ॥ ಶಾಲಿನಿ ರಜನೀಶ್, ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಶಿಕ್ಷಣ)
ಡಾ॥ ಏಕ್‌ರೂಪ್ ಕೌರ್, ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ ✓
ಶ್ರೀ ಅನಿಲ್ ಕುಮಾರ್, ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆ ✓
ಶ್ರೀಮತಿ ಸಿ.ಶಿಖಾ, ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ✓
ಶ್ರೀ ರಾಮು, ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ✓
ಶ್ರೀಮತಿ ಫಿಲೊಮಿನೂ ಲೊಬೋ, ನಿರ್ದೇಶಕರು (ಪ್ರೌಢ ಶಿಕ್ಷಣ) ✓
ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ, ಎಂಎಲ್‌ಸಿ & ಕೇಂದ್ರ ಸ್ಥಾನಿಕ ಆಯುಕ್ತರು, ಭಾಸ್ಕೌ&ಗೈಡ್ಸ್
ಶ್ರೀ ಎಂ.ಎ.ಖಾಲಿದ್, ರಾಜ್ಯ ಆಯುಕ್ತರು (ಸ್ಕೌಟ್ಸ್) ಭಾಸ್ಕೌ&ಗೈಡ್ಸ್, ಕರ್ನಾಟಕ
ಶ್ರೀಮತಿ ಗೀತಾ ನಟರಾಜ್, ರಾಜ್ಯ ಆಯುಕ್ತರು (ಗೈಡ್ಸ್) ಭಾಸ್ಕೌ&ಗೈಡ್ಸ್, ಕರ್ನಾಟಕ
ಶ್ರೀ ಚೆನ್ನಸ್ವಾಮಿ ರೆಡ್ಡಿ, ರಾಜ್ಯ ಕಾರ್ಯದರ್ಶಿಗಳು, ಭಾಸ್ಕೌ&ಗೈಡ್ಸ್, ಕರ್ನಾಟಕ
ಶ್ರೀ ಕೆ.ಗಂಗಪ್ಪಗೌಡ, ಜಂಟಿ ರಾಜ್ಯ ಕಾರ್ಯದರ್ಶಿಗಳು (ಸ್ಕೌಟ್ಸ್), ಭಾಸ್ಕೌ&ಗೈಡ್ಸ್, ಕರ್ನಾಟಕ
ಶ್ರೀಮತಿ ಬಿ.ವಿ.ರಾಮಲತಾ, ಜಂಟಿ ರಾಜ್ಯ ಕಾರ್ಯದರ್ಶಿಗಳು (ಗೈಡ್ಸ್), ಭಾಸ್ಕೌ&ಗೈಡ್ಸ್, ಕರ್ನಾಟ